# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 963 |
| ಸದಸ್ಯರ ಹೆಸರು | ಶ್ರೀ ಮಧು ಜಿ. ಮಾದೇಗೌಡ (ಪದವೀಧರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 24-07-2024 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಜಿಲ್ಲೆ ಮತ್ತು ತಾಲ್ಲೂಕುಗಳ ಪುನರ್ ರಚನೆ ಸಂಬಂಧ ಇದುವರೆಗೆ ಸರ್ಕಾರಕ್ಕೆ ವರದಿ ಸಲ್ಲಿಸಿರುವ ಸಮಿತಿಗಳು ಯಾವುವು; ಈ ಸಮಿತಿಗಳ ಪ್ರಮುಖ ಶಿಫಾರಸ್ಸುಗಳೇನು(ಸಂಪೂರ್ಣ ಮಾಹಿತಿ ನೀಡುವುದು) | ಜಿಲ್ಲೆ ಮತ್ತು ತಾಲ್ಲೂಕುಗಳ ಪುನರ್ ರಚನೆ ಸಂಬಂಧ ಈ ಕೆಳಕಂಡ ಸಮಿತಿಗಳನ್ನು ರಚಿಸಲಾಗಿರುತ್ತದೆ.<br><br>1. ಶ್ರೀ ವಾಸುದೇವರಾವ್ ಆಯೋಗ-1973<br>2. ಶ್ರೀ ಟಿ.ಎಂ. ಹುಂಡೇಕರ್ ಸಮಿತಿ-1984<br>3. ಶ್ರೀ ಪಿ.ಸಿ. ಗದ್ದಿಗೌಡರ್ ಸಮಿತಿ-1986<br>4. ಶ್ರೀ ವಿ. ಬಾಲಸುಬ್ರಮಣಿಯನ್ ಸಮಿತಿ - 2007.<br>5. ಶ್ರೀ ಎಂ.ಬಿ. ಪ್ರಕಾಶ್ ಸಮಿತಿ-2009.<br><br>ಮೇಲ್ಕಂಡ ಸಮಿತಿಗಳು ವಿಸ್ತೀರ್ಣ, ಜನಸಂಖ್ಯೆ, ಜಿಲ್ಲೆಯ ಅಭಿವೃದ್ಧಿ ಮಟ್ಟ, ಜನಸಂಖ್ಯೆಯಲ್ಲಿನ ವಿವಿಧ ವರ್ಗಗಳ ವಸ್ತುಸ್ಥಿತಿ, ನೀರಾವರಿ , ಯೋಜನೆಗಳ ಪ್ರಗತಿ, ಔದ್ಯೋಗಿಕ, ಕೃಷಿ ಕ್ಷೇತ್ರದಲ್ಲಿ ಮುಂದಿನ ದಶಕಗಳಲ್ಲಿ ಆಗಬಹುದಾದ ಬೆಳವಣಿಗೆ ಮುಂತಾದವುಗಳನ್ನು ಪರಿಗಣಿಸಿ ಜಿಲ್ಲೆ ಮತ್ತು ತಾಲ್ಲೂಕುಗಳನ್ನು ಪುನರ್ ವಿಂಗಡನೆ ಮಾಡಬಹುದೆಂದು ಶಿಫಾರಸ್ಸು ಮಾಡಿರುತ್ತವೆ. |
| ಆ) | ಆಡಳಿತಾತ್ಮಕ ಹಿತದೃಷ್ಟಿಯಿಂದ ರಾಜ್ಯದಲ್ಲಿ ಹೊಸ ಜಿಲ್ಲೆ ಮತ್ತು ಹೊಸ ತಾಲ್ಲೂಕುಗಳನ್ನು ರಚಿಸಲು ಸರ್ಕಾರ ಉದ್ದೇಶಿಸಿದೆಯೇ(ವಿವರ ನೀಡುವುದು); | ಪ್ರಸ್ತುತ ನೂತನ ಜಿಲ್ಲೆ ಮತ್ತು ತಾಲ್ಲೂಕುಗಳನ್ನು ಸೃಜಿಸಲು ಸರ್ಕಾರ ಉದ್ದೇಶಿಸಿರುವುದಿಲ್ಲ. |
| ಇ) | ಹೊಸ ಜಿಲ್ಲೆ ಮತ್ತು ತಾಲ್ಲೂಕುಗಳನ್ನು ರಚನೆ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆ / ಮನವಿಗಳು ಸ್ವೀಕೃತವಾಗಿವೆಯೇ;(ಮಾಹಿತಿ ನೀಡುವುದು) | ಹೊಸ ಜಿಲ್ಲೆ ಮತ್ತು ತಾಲ್ಲೂಕುಗಳನ್ನು ರಚನೆ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆ / ಮನವಿಗಳು ಸ್ವೀಕೃತವಾಗಿದ್ದು, ಈ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಸಂಬಂಧ ಪಟ್ಟ ಜಿಲ್ಲಾಧಿಕಾರಿಗಳಿಗೆ ಪತ್ರ ಬರೆಯಲಾಗಿರುತ್ತದೆ. |
| ಈ) | ಹೊಸ ತಾಲ್ಲೂಕುಗಳನ್ನು ರಚಿಸಲು ಇರುವ ಮಾರ್ಗಸೂಚಿಗಳೇನು; | ಹೊಸದಾಗಿ ತಾಲ್ಲೂಕುಗಳನ್ನು ರಚಿಸಲು ನಿರ್ದಿಷ್ಟ ಮಾನದಂಡಗಳನ್ನು ನಿಗಧಿಪಡಿಸಿರುವುದಿಲ್ಲ. ಭೌಗೋಳಿಕ ಹಿನ್ನೆಲೆ, ಆಡಳಿತಾತ್ಮಕ ಅಗತ್ಯತೆ ಹಾಗೂ ಸಾರ್ವಜನಿಕ ಹಿತಾಸಕ್ತಿಗಳನ್ನು ಗಮನದಲ್ಲಿಟ್ಟುಕೊಂಡು ಜಿಲ್ಲಾಧಿಕಾರಿಗಳಿಂದ ಸ್ವೀಕೃತವಾಗುವ ಪ್ರಸ್ತಾವನೆಯನ್ನು ಆಧರಿಸಿ ಇಂತಹ ಪ್ರಸ್ತಾವನೆಗಳನ್ನು<br>ಪರಿಶೀಲಿಸಲಾಗುವುದು. ಜೊತೆಗೆ, ನೂತನ ತಾಲ್ಲೂಕು ಗಳನ್ನು ರಚಿಸುವ ವಿಷಯವು ಸರ್ಕಾರದ ಸಾಮಾನ್ಯ ನೀತಿಗೆ ಸಂಬಂಧಿಸಿದ್ದಾಗಿದೆ. ನೂತನ ತಾಲ್ಲೂಕಾಗಿ ರಚಿಸಬೇಕಾದರೆ ಭೌಗೋಳಿಕ ಮತ್ತು |

| | | |
|---|---|---|
| | | ಆಡಳಿತಾತ್ಮಕ ಅಗತ್ಯತೆಗಳ ಜೊತೆಗೆ ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ಸಹ ಅವಲಂಬಿಸಿದ್ದು, ಸಂಪನ್ಮೂಲಗಳ ಕ್ರೋಢೀಕರಣ ಮತ್ತು ಹಣಕಾಸಿನ ಇತಿಮಿತಿಗಳನ್ನು ಒಳಗೊಂಡಿರುತ್ತದೆ. |
| ಉ) | ಜನಸಂಖ್ಯೆ ಶಿಕ್ಷಣ, ವಾಣಿಜ್ಯ ದೃಷ್ಟಿಯಿಂದಲೂ ಹೆಚ್ಚಿನ ಬೆಳವಣಿಗೆ ಕಂಡು ವೇಗವಾಗಿ ಬೆಳೆಯುತ್ತಿರುವ ಮಂಡ್ಯ ಜಿಲ್ಲೆಯ ಭಾರತೀನಗರ (ಕೆ.ಎಂ.ದೊಡ್ಡಿ)ವನ್ನು ತಾಲ್ಲೂಕು ಕೇಂದ್ರವನ್ನಾಗಿ ರಚಿಸುವ ಕುರಿತು ಸರ್ಕಾರದ ನಿಲುವೇನು? | ಭಾರತೀನಗರವನ್ನು (ಕೆ.ಎಂ.ದೊಡ್ಡಿ) ತಾಲ್ಲೂಕು ಕೇಂದ್ರವನ್ನಾಗಿ ರಚಿಸುವ ಕುರಿತು ಜಿಲ್ಲಾಧಿಕಾರಿ ಮಂಡ್ಯ ಜಿಲ್ಲೆ ಇವರಿಂದ ಪ್ರಸ್ತಾವನೆ ಸ್ವೀಕೃತಗೊಂಡಿರುವುದಿಲ್ಲ. |

ಸಂಖ್ಯೆ: ಕಂಇ 67 ಎಲ್ಆರ್‌ಡಿ 2024

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು